ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:ರಸ್ತೆ ಸುರಕ್ಷತೆ-1/ಆರ್‌ಆರ್‌/15.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-9-2015.

## ಸುತ್ತೋಲೆ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯಲ್ಲಿ ಗ್ರಾಮ ಪರಿಮಿತಿಯಲ್ಲಿ ಬರುವ ರಾಜ್ಯ / ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಕುರಿತು.

ಉಲ್ಲೇಖ: ಸರ್ವೋಚ್ಛ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯ ನಿರ್ದೇಶನ ದಿನಾಂಕ:1-6-2015 ಮತ್ತು 22-6-2015

ರಾಜ್ಯ / ರಾಷ್ಟ್ರೀಯ ಹೆದ್ದಾರಿಗಳ ಗ್ರಾಮ ಪರಿಮಿತಿಯ ಜನವಸತಿ ಪ್ರದೇಶಗಳಲ್ಲಿ ಸೂಕ್ತ ರಸ್ತೆ ಸುರಕ್ಷತಾ ಕ್ರಮಗಳಿಲ್ಲದೆ, ಅಪಘಾತಗಳು ಹೆಚ್ಚಾಗುತ್ತಿರುವುದೆಂದು ಮಾನ್ಯ ಸರ್ವೋಚ್ಛ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯು ಉಲ್ಲೇಖಿತ ಪತ್ರಗಳಲ್ಲಿ ತೀವ್ರ ಕಳವಳ ವ್ಯಕ್ತಪಡಿಸಿರುತ್ತದೆ. ಈ ಸಂಬಂಧ ಸಾರಿಗೆ ಇಲಾಖೆಯು ದಿನಾಂಕ:4-9-2015ರ ಪತ್ರದಲ್ಲಿ ಗ್ರಾಮೀಣ ರಸ್ತೆಗಳಲ್ಲಿ ರಸ್ತೆ ಸುರಕ್ಷತಾ ಕ್ರಮದ ಬಗ್ಗೆ ಕೆಳಕಂಡ ಅಂಶಗಳನ್ನು ಪ್ರಸ್ತಾವಿಸಿ, ರಸ್ತೆ ಅಪಘಾತಗಳನ್ನು ಕಡಿಮೆಗೊಳಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಸೂಚನೆಗಳನ್ನು ನೀಡಲಾಗಿರುತ್ತದೆ.

| ಕ್ರ. ಸಂ | ಪ್ರಸ್ತಾಪಿಸಲಾದ ಅಂಶ | ತೆಗೆದುಕೊಳ್ಳಬೇಕಾದ ಕ್ರಮ |
|---|---|---|
| 1 | ರಾಜ್ಯ / ರಾಷ್ಟ್ರೀಯ ಹೆದ್ದಾರಿಗಳ ಗ್ರಾಮ ಪರಿಮಿತಿಯ ಜನವಸತಿ ಪ್ರದೇಶಗಳಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆಯನ್ನು ಅಳವಡಿಸುವುದು. | ಗ್ರಾಮ ಪರಿಮಿತಿಯಲ್ಲಿ ಪ್ರಾರಂಭವಾಗುವ ಬೆಳಕಿನ ವ್ಯವಸ್ಥೆಯೊಂದಿಗೆ ಗ್ರಾಮ ಇರುವ ಕುರಿತು ಮಾಹಿತಿ ಹಾಗೂ ಎಚ್ಚರಿಕೆ ಫಲಕಗಳನ್ನು ಹಾಗೂ ಗ್ರಾಮ ಪರಿಮಿತಿಯ ರಾಷ್ಟ್ರೀಯ / ರಾಜ್ಯ ರಸ್ತೆಯ ಎರಡೂ ಬದಿ ಸೂಕ್ತ ಬೆಳಕಿನ ವ್ಯವಸ್ಥೆಯನ್ನು ಅಳವಡಿಸುವುದು. |
| 2 | ರಸ್ತೆ ಬದಿ ಇರುವ ಅಪಾಯಕಾರಿ ವಸ್ತುಗಳನ್ನು ತೆರವುಗೊಳಿಸುವುದು. | ರಸ್ತೆ ಬದಿ ಇರುವ ಜಾಹೀರಾತು ಫಲಕಗಳು, ಡಾಬಾ ಮತ್ತು ಮದ್ಯದಂಗಡಿಗಳು ವಿದ್ಯುತ್‌ಕಂಬಗಳು, ಪಾರ್ಕಿಂಗ್ ಮುಂತಾದವುಗಳನ್ನು ತೆರವುಗೊಳಿಸುವುದು ಮತ್ತು ರಸ್ತೆಯಲ್ಲಿನ ವಾಹನಗಳ ಓಡಾಟಕ್ಕೆ ಯಾವುದೇ ತೊಂದರೆಯಾಗದಂತೆ ಕ್ರಮ ಜರುಗಿಸುವುದು. |

| | | |
|---|---|---|
| 3 | ಹೆದ್ದಾರಿಗಳು ಹಾಗೂ ಸರ್ವಿಸ್ ರಸ್ತೆಗಳಲ್ಲಿ ಸೈಕಲ್ ಸವಾರರು ಮುಂತಾದವುಗಳಿಗಾಗಿ ಪ್ರತ್ಯೇಕ ರಸ್ತೆಗಳನ್ನು ಒದಗಿಸುವುದು | ಹೆದ್ದಾರಿಗಳು ಹಾಗೂ ಅದಕ್ಕೆ ಹೊಂದಿಕೊಂಡ ಸರ್ವಿಸ್ ರಸ್ತೆಗಳಲ್ಲಿ, ಸೈಕಲ್ ಮುಂತಾದ ವಾಹನಗಳಿಗೆ, ಪಾದಚಾರಿಗಳಿಗೆ ಅಗತ್ಯವಿದ್ದ ಕಡೆ ಪ್ರತ್ಯೇಕ ರಸ್ತೆಗಳನ್ನು ನಿರ್ಮಿಸಲು ಜಿಲ್ಲಾ ಪಂಚಾಯತ್ / ಗ್ರಾಮ ಪಂಚಾಯತ್ ವತಿಯಿಂದ ಕ್ರಮ ಕೈಗೊಳ್ಳುವುದು ಮತ್ತು ಗ್ರಾಮದ ರಸ್ತೆಯು ಮುಖ್ಯ ರಸ್ತೆ ಸೇರುವ ಜಾಗೆಯಲ್ಲಿ ಸೂಕ್ತ ಎಚ್ಚರಿಕೆ ಫಲಕಗಳನ್ನು ಅಳವಡಿಸುವುದು. |
| 4 | ಸಾರ್ವಜನಿಕ ಪಾದಚಾರಿ ಮಾರ್ಗ ಹಾಗೂ ರಸ್ತೆಗಳ ಅತಿಕ್ರಮಣವನ್ನು ತೆರವುಗೊಳಿಸುವುದು. | ಮುಖ್ಯ ರಸ್ತೆ ಬದಿಯ ಸಾರ್ವಜನಿಕ ಪಾದಚಾರಿ ಮಾರ್ಗ ಹಾಗೂ ರಸ್ತೆಗಳ ಅತಿಕ್ರಮಣವನ್ನು ಸ್ಥಳೀಯ ಸಂಸ್ಥೆಗಳಾದ ಜಿಲ್ಲಾ ಪಂಚಾಯತ್ / ಗ್ರಾಮ ಪಂಚಾಯತ್ ವತಿಯಿಂದ ಗುರುತಿಸಿ, ಕೂಡಲೇ ತೆರವುಗೊಳಿಸಲು ಕ್ರಮ ಕೈಗೊಳ್ಳುವುದು. |

ಆದುದರಿಂದ ಹೆದ್ದಾರಿಗಳಲ್ಲಿ ಬರುವ ಗ್ರಾಮ ಪರಿಮಿತಿಗಳಲ್ಲಿ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಯಾವುದೇ ಅಪಘಾತಗಳಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಹಾಗೂ ಈ ಕುರಿತು ಸೂಕ್ತ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು/ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ತಂಡ ರಚಿಸಿ ಪರಿವೀಕ್ಷಣೆ ಮಾಡಿಸುವಂತೆ ಹಾಗೂ ಕ್ರಿಯಾ ಯೋಜನೆಯಂತೆ ಸೂಕ್ತ ಅನುಷ್ಠಾನಕ್ಕೆ ಅಗತ್ಯ ಕ್ರಮಗಳನ್ನು ಜಿಲ್ಲಾ ಪಂಚಾಯತಿ ವತಿಯಿಂದ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಸೂಚನೆ ನೀಡಿದೆ.

ಈ ವಿಷಯದಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿ:

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.

೩. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ-ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, ೩ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-೧.

4. ಎಲ್ಲಾ ಅಧೀಕ್ಷಕ ಇಂಜಿನಿಯರ್, ಪಂ.ರಾ.ಇಂ.ವೃತ್ತ, ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

5. ಎಲ್ಲಾ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ವಿಭಾಗ, ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

೬. ನಿರ್ದೇಶಕರ ಕಚೇರಿ, ರಸ್ತೆ ಸುರಕ್ಷತಾ ಕೋಶ, ಸಾರಿಗೆ ಇಲಾಖೆ, ನಂ:೩೯, 7ನೇ ಮಹಡಿ, ಎಂಎಸ್‌ಐಎಲ್ ಕಟ್ಟಡ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-560052.